# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1029

**ಸದಸ್ಯರ ಹೆಸರು** : ಶ್ರೀ ಐವನ್ ಡಿ'ಸೋಜಾ
(ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 22.08.2025

**ಉತ್ತರಿಸುವ ಸಚಿವರು** : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಕೊಂಕಣಿ ಅಕಾಡೆಮಿಯ ಕಟ್ಟಡದ ಕಾಮಗಾರಿ ಅರ್ಧದಲ್ಲಿ ನಿಂತು ವರ್ಷಗಳು ಆದರೂ ಹಾಗೂ ಅದನ್ನು ಪೂರ್ಣಗೊಳಿಸಿ. ನೀಡುವುದಾಗಿ ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಅದನ್ನು ಅನುಷ್ಠಾನಗೊಳಿಸದಿರಲು ಕಾರಣವೇನು; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಕಸಂವಾ 110 ಕೆಓಎಲ್ ಆಕ 2019, ದಿನಾಂಕ:07.12.2019ರಂದು ಮಂಗಳೂರಿನ ಕೊಂಕಣಿ ಸಾಹಿತ್ಯ ಅಕಾಡೆಮಿ ಕಟ್ಟಡ ನಿರ್ಮಾಣಕ್ಕೆ ರೂ.500.00 ಲಕ್ಷಗಳಿಗೆ ಮಂಜೂರಾತಿ ನೀಡಿ, ರೂ.300.00ಲಕ್ಷಗಳನ್ನು ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿತ್ತು.<br><br>ನಂತರದ ವರ್ಷಗಳಲ್ಲಿ, ಗಡಿ ಪ್ರಾಧಿಕಾರಕ್ಕೆ ಕಡಿಮೆ ಅನುದಾನ ಹಂಚಿಕೆ ಮಾಡಿದ ಪ್ರಯುಕ್ತ ಹಾಗೂ ಗಡಿ ಪ್ರಾಧಿಕಾರದ ಕೋರಿಕೆಯಂತೆ ಮೂಲ ಮಂಜೂರಾತಿಯನ್ನು ರೂ.300.00 ಲಕ್ಷಗಳಿಗೆ ಸೀಮಿತಿಗೊಳಿಸಿ ಪರಿಷ್ಕೃತ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ:ಕಸಂವಾ 47 ಕೆಓಎಲ್ ಆಕ 2021, ದಿನಾಂಕ:02.12.2021ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br><br>ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:19.07.2021 ಕೊಂಕಣಿ ಸಾಹಿತ್ಯ ಅಕಾಡೆಮಿ ಇವರ ಸಮ್ಮುಖದಲ್ಲಿ ನಡೆಸಿರುವ ಸಭೆಯಲ್ಲಿ ರೂ.300.00ಲಕ್ಷಗಳ ಮಿತಿಯಲ್ಲಿಯೇ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸುವುದಾಗಿ ಕೊಂಕಣಿ ಸಾಹಿತ್ಯ ಅಕಾಡೆಮಿರವರು ಒಪ್ಪಿಕೊಂಡಿದ್ದು, ಸಭಾ ನಡವಳಿಯಲ್ಲಿ ದಾಖಲಿಸಲಾಗಿದೆ. ಲೋಕೋಪಯೋಗಿ ಇಲಾಖೆಯವರು ಜುಲೈ-2024ರಂದು ಸಲ್ಲಿಸಿರುವ ಪ್ರಗತಿ ವರದಿಯಂತೆ ರೂ. 300.00 ಲಕ್ಷಗಳ ಟೆಂಡರ್ ಮತ್ತು ಅಂದಾಜು ಪಟ್ಟಿಯ ಪ್ರಕಾರ ತಳಮಹಡಿ, ನೆಲಮಹಡಿ, ಮೊದಲನೇ ಮಹಡಿಯ ಸ್ಟ್ರಕ್ಚರಲ್ ಕಾಮಗಾರಿ, ಲ್ಯಾಟ್ರರೆಟ್ ಗೋಡೆ ಹಾಗೂ ಪ್ಲಾಸ್ಟರಿಂಗ್ ಕೆಲಸಗಳನ್ನು ಪೂರ್ಣಗೊಳಿಸಿರುವುದಾಗಿ ತಿಳಿಸಿ, ರೂ. 269.54 ಲಕ್ಷಗಳ ವೆಚ್ಚಕ್ಕೆ ಹಣಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ. ನಂತರ, ಸ್ಟ್ರಕ್ಚರಲ್ ವಿನ್ಯಾಸದಲ್ಲಿ ಬದಲಾವಣೆಯಾಗಿರುವುದರಿಂದ, ಹೆಚ್ಚುವರಿಯಾಗಿ ರೂ. 350.00 ಲಕ್ಷಗಳನ್ನು ಮಂಜೂರು ಮಾಡಲು ಕೋರಿರುತ್ತಾರೆ. |

| | | |
|---|---|---|
| | | ಮೂಲ ಅಂದಾಜು ಪಟ್ಟಿಯಂತೆ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸುವುದಾಗಿ ಸಂಬಂಧಪಟ್ಟ ಅಕಾಡೆಮಿ, ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ರವರು ಒಪ್ಪಿಕೊಂಡಿದ್ದು, ನಂತರ ಅಂದಾಜು ಪಟ್ಟಿಗಳನ್ನು ಪರಿಷ್ಕರಿಸಿ ಹೆಚ್ಚುವರಿ ಅನುದಾನವನ್ನು ಮಂಜೂರು ಮಾಡಲು ಕೋರಿರುವುದಕ್ಕೆ ನಿಯಮಗಳಲ್ಲಿ ಅವಕಾಶವಿಲ್ಲದ ಕಾರಣ ಹೆಚ್ಚುವರಿ ಅನುದಾನವನ್ನು ಪರಿಗಣಿಸಲು ಸಾಧ್ಯವಿಲ್ಲವೆಂದು ಕೊಂಕಣಿ ಸಾಹಿತ್ಯ ಅಕಾಡೆಮಿ ಮತ್ತು ಜಿಲ್ಲಾಧಿಕಾರಿಗಳಿಗೆ ರೂ.300.00 ಲಕ್ಷಗಳ ಟೆಂಡರ್ ಮೊತ್ತ ಮತ್ತು ಅಂದಾಜು ಪಟ್ಟಿಯಲ್ಲಿ ತಿಳಿಸಿರುವಂತೆ ಎಲ್ಲಾ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆಯವರಿಂದ ಪೂರ್ಣಗೊಳಿಸಿಕೊಳ್ಳಲು ಮತ್ತು ಭವನವನ್ನು ಲೋಕಾರ್ಪಣೆಗೊಳಿಸಲು ಹಾಗೂ ಯಾವುದೇ ಹೆಚ್ಚುವರಿ ಮೊತ್ತದ ಕೋರಿಕೆಗಳಿಗೆ ಗಡಿ ಪ್ರಾಧಿಕಾರ ಅನುದಾನ ನೀಡುವುದಿಲ್ಲವೆಂದು ತಿಳಿಸಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್/ಕೆಬಿಎಡಿ/1/2025 ದಿನಾಂಕ:15.03.2025ರನ್ವಯ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯೋಜನಾ ಇಲಾಖೆಗೆ ವರ್ಗಾಯಿಸಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ) |
| (ಆ) | ಕೊಂಕಣಿ ಸಾಹಿತ್ಯ ಅಕಾಡೆಮಿಯು ಆನೇಕ ಚಟುವಟಿಕೆಗಳನ್ನು ನಡೆಸುತ್ತಿದ್ದು, ಭವನ ಮತ್ತು ಸರಿಯಾದ ಕಛೇರಿ ಇಲ್ಲದೇ ಇಲ್ಲದೇ ಅಂಗಡಿಯ ರೂಪದಲ್ಲಿ ಕಾರ್ಯ ನಿರ್ವಹಿಸುತ್ತಿರುವುದನ್ನು ಇಲಾಖೆಯ ಗಮನಕ್ಕೆ ಬಂದಿದೆಯೇ: (ವಿವರ ನೀಡುವುದು) | ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯು ಮಂಗಳೂರು ಮಹಾನಗರ ಪಾಲಿಕೆಯ ಕಟ್ಟಡದಲ್ಲಿ ಬಾಡಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದೆ. |
| ಇ) | ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಪೂರ್ಣ ಪ್ರಮಾಣದ ಕೊಂಕಣಿ ಭಾಷೆಯನ್ನು ತಿಳಿದಂತಹ "ರಿಜಿಸ್ಟ್ರಾರ್" (Register) ರನ್ನು ನೇಮಕ ಮಾಡಲು ಇಲಾಖೆ ಕ್ರಮಕೈಗೊಳ್ಳುವುದೇ: | ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಪೂರ್ಣ ಪ್ರಮಾಣದ ಕೊಂಕಣಿ ಭಾಷೆಯನ್ನು ತಿಳಿದಂತಹ "ರಿಜಿಸ್ಟ್ರಾರ್" (Registrar) ರನ್ನು ನೇಮಕ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಈ) | ಈ ಅಕಾಡೆಮಿಯು ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಕೊಂಕಣಿ ಕಲಿಸಲು ಮಾಡುತ್ತಿರುವ ಪ್ರಯತ್ನಗಳು ಯಾವುವು; ಎಷ್ಟು ಮಂದಿ ಕೊಂಕಣಿ ಭಾಷೆಯನ್ನು ಕಲಿಯುತ್ತಿದ್ದಾರೆ:(ವಿವರ ನೀಡುವುದು) | ಕೊಂಕಣಿ ಭಾಷೆಗೆ ಕೇಂದ್ರ ಸಾಹಿತ್ಯ ಅಕಾಡೆಮಿಯ ಮಾನ್ಯತೆ ದೊರೆತು 8ನೇ ಪರಿಚ್ಛೇದದಲ್ಲಿ ಸೇರ್ಪಡೆಯಾದ ದಿನಾಂಕದ ನೆನಪಿಗಾಗಿ ಕೊಂಕಣಿ ಭಾಷಾ ಮಾನ್ಯತಾ ದಿವಸ ಅಚರಣೆ, ಮಕ್ಕಳಲ್ಲಿ ಕೊಂಕಣಿ ಭಾಷೆಯ ಬಗ್ಗೆ ಆಸಕ್ತಿ ಮೂಡಿಸುವಂತಹ ಸಾಹಿತ್ಯ ಉತ್ಸವ, ಕಲಾಪ್ರತಿಭೋತ್ಸವ ಹಾಗೂ ವಿವಿಧ ಸ್ಪರ್ಧೆಗಳನ್ನು ನಡೆಸಲಾಗುತ್ತಿದೆ.<br><br>ಕೊಂಕಣಿ ಭಾಷೆಯ ಬಗ್ಗೆ ಜಾಗೃತಿ ಮೂಡಿಸುವಂತಹ ಕಾರ್ಯಕ್ರಮಗಳನ್ನು ಅಕಾಡೆಮಿ ಮೂಲಕ ರಾಜ್ಯಾದ್ಯಂತ ನಡೆಸಲಾಗುತ್ತಿದೆ. |

| | | |
|---|---|---|
| | | ಯುವಜನರಲ್ಲಿ ಭಾಷಾಭಿಮಾನ ಮೂಡಿಸುವಲ್ಲಿ ಸಹಕರಿಸುವಂತಹ ಯುವ ಮಹೋತ್ಸವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. |
| ಉ) | ಕೊಂಕಣಿ ಅಕಾಡೆಮಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು: ಮಂಜೂರಾದ ಹುದ್ದೆಗಳೆಷ್ಟು? (ವಿವರ ನೀಡುವುದು) | ಕೊಂಕಣಿ ಅಕಾಡೆಮಿಯಲ್ಲಿ ಒಟ್ಟು 4 ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ.<br><br>**ಅಕಾಡೆಮಿಗೆ ಮಂಜೂರಾದ ಹುದ್ದೆಗಳ ವಿವರ:**<br><br>ರಿಜಿಸ್ಟ್ರಾರ್ - 1<br>ಕಛೇರಿ ಅಧೀಕ್ಷಕರು - 1<br>ಪ್ರಥಮದರ್ಜೆ ಸಹಾಯಕರು - 1<br>ದಲಾಯತ್ - 1 |

**ಸಂಖ್ಯೆ**:ಕಸಂವಾ 85 ಕೆಎಲ್ ಆಕ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಡಳಿತ ವ್ಯಾಪ್ತಿಯಿಂದ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಆಡಳಿತ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಬಗ್ಗೆ.

ಓದಲಾಗಿದೆ:
1) ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2010ರ ಅಧಿಸೂಚನೆ ಸಂಖ್ಯೆ:ಸಂವ್ಯ ಶಾಇ 45 ಶಾಸನ 2009, ಬೆಂಗಳೂರು ದಿನಾಂಕ: 03ನೇ ಏಪ್ರಿಲ್, 2010 ಮತ್ತು ದಿನಾಂಕ:13-05-2010.
2) ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಸಚಿವಾಲಯ ಅಧಿಸೂಚನೆ ಸಂ:ಕಸಂವಾಪ್ರ 14 ಕೆಓಎಲ್ 2011, ಬೆಂಗಳೂರು, ದಿನಾಂಕ:24-03-2011.
3) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆದೇಶ ಸಂ:ಕಸಂವಾ 560 ಕಸಧ 2013, ಬೆಂಗಳೂರು ದಿನಾಂಕ:10-10-2017.
4) ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸರ್ಕಾರ ರವರ ಅಧಿಸೂಚನೆ ಸಂ: ಕಸಂವಾ 16 ಕೆಓಎಲ್ ಆಕ 2021, ದಿನಾಂಕ:26-09-2023.
5) ಶ್ರೀ. ಟಿ.ಎಂ. ವಿಜಯ ಭಾಸ್ಕರ್, ಭಾ.ಆ.ಸೇ(ನಿ) ಅಂದಿನ ಅಧ್ಯಕ್ಷರು, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ಮತ್ತು ಹಿಂದಿನ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ವರದಿ ದಿನಾಂಕ:05-03-2024.
6) ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಾಮಾನ್ಯ ಸಭೆಯ ನಡವಳಿ ದಿನಾಂಕ:13-06-2024.
7) ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ದಿನಾಂಕ:25-10-2024ರ ಹಾಗೂ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಾಲಯದ ಅನುಮೋದನೆ ದಿನಾಂಕ:20-11-2024.
8) ಕರ್ನಾಟಕ ರಾಜ್ಯಪತ್ರ ವಿಶೇಷ ಪ್ರಕಟಣೆ ಸಂ:ಸಿಆಸುಇ 01 ಎಆರ್‌ಬಿ 2025, ದಿನಾಂಕ:01-03-2025.
9) 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-279.

*****

### ಪ್ರಸ್ತಾವನೆ:-

ಮೇಲೆ ಓದಲಾದ (1)ರಲ್ಲಿ, ಹೊರರಾಜ್ಯಗಳ ಗಡಿ ಕನ್ನಡಿಗರ ಸಮಸ್ಯೆಗಳನ್ನು ಅಧ್ಯಯನ ಮಾಡಲು ಸರ್ಕಾರ ನೇಮಿಸಿದ್ದ **ಶ್ರೀ ವಾಟಾಳ್ ನಾಗರಾಜ್ ರವರ** ಅಧ್ಯಕ್ಷತೆಯ ಏಕ ಸದಸ್ಯ ಆಯೋಗವು ಸರ್ಕಾರಕ್ಕೆ ಸಲ್ಲಿಸಿದ ಮಧ್ಯಂತರ ವರದಿ ದಿನಾಂಕ:18-08-2000 ಹಾಗೂ **ಡಾ. ಬರಗೂರು ರಾಮಚಂದ್ರಪ್ಪ ರವರ ಅಧ್ಯಕ್ಷತೆಯ 'ಗಡಿ ನಾಡು ಅಧ್ಯಯನ ಆಯೋಗ'ವು ಸರ್ಕಾರಕ್ಕೆ ಸಲ್ಲಿಸಿದ 'ಗಡಿನಾಡು ಅಧ್ಯಯನ ಸಮಗ್ರ ವರದಿ' ಮಾರ್ಚ್ 2002 ರಲ್ಲಿನ ಪ್ರಮುಖ ಶಿಫಾರಸ್ಸುಗಳನ್ನು ಆಧರಿಸಿ** ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿಗಾಗಿ ಸಂಬಂಧಪಟ್ಟ ಯೋಜನೆಗಳು, ಕಾರ್ಯಕ್ರಮಗಳ ಅನುಷ್ಠಾನ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪ ಬಂಧಗಳನ್ನು ಕಲ್ಪಿಸಿ ರಾಜ್ಯದ 19 ಗಡಿ ಜಿಲ್ಲೆಗಳು, 52 ತಾಲ್ಲೂಕುಗಳನ್ನು ಒಳಗೊಂಡಂತೆ ಹೊರರಾಜ್ಯದ 06 ಗಡಿ ರಾಜ್ಯಗಳ ವ್ಯಾಪ್ತಿಯಲ್ಲಿ ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ವ್ಯಾಪ್ತಿಗೆ ಒಳಪಡುವ ಎಲ್ಲಾ ಅಭಿವೃದ್ಧಿ ಕೆಲಸಗಳ ಅನುಷ್ಠಾನಕ್ಕೆ ಸರ್ಕಾರವು ಅಧಿಸೂಚನೆಯನ್ನು ಹೊರಡಿಸಿರುತ್ತದೆ.

ಮೇಲೆ ಓದಲಾದ (2)ರಲ್ಲಿ, ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲಿನ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು, ಅಧ್ಯಾದೇಶಗಳು, ಕೇಂದ್ರ ಮತ್ತು ರಾಜ್ಯದ ಶಾಸನದ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಹಾಗೂ ಕರ್ನಾಟಕ ಉಚ್ಚನ್ಯಾಯಾಲಯ ಮಾಡಿದ ನಿಯಮಗಳನ್ನು ಅನುಸರಿಸಿ ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಸಚಿವಾಲಯವು 2010ರ ಅಧಿನಿಯಮಕ್ಕೆ ಸೂಕ್ತ ನಿಯಮಗಳನ್ನು ರೂಪಿಸಿದೆ.

ಮೇಲೆ ಓದಲಾದ (3)ರಲ್ಲಿ, ಶ್ರೀ ಹೆಚ್.ಕೆ. ಪಾಟೀಲ್, ಅಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿನ ಸಚಿವ ಸಂಪುಟದ ಉಪ ಸಮಿತಿಯು ದಿನಾಂಕ: 05-05-2017 ರಲ್ಲಿ ಸರ್ಕಾರಕ್ಕೆ ಸಲ್ಲಿಸಿದ ವರದಿಯಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಸಚಿವ ಸಂಪುಟದ ಉಪ ಸಮಿತಿಯ ಶಿಫಾರಸ್ಸುಗಳ ಅನುಸಾರ ರಾಜ್ಯದಲ್ಲಿ ಸಾಂಸ್ಕೃತಿಕ ನೀತಿಯನ್ನು ಜಾರಿಗೊಳಿಸಿ ರಾಜ್ಯದ 19 ಗಡಿ ಜಿಲ್ಲೆಗಳು, 63 ಗಡಿ ತಾಲ್ಲೂಕುಗಳು ಹಾಗೂ 06 ಗಡಿಭಾಗದ ಹೊರರಾಜ್ಯಗಳ ಜೊತೆಗೆ "ಗಡಿನಾಡು ಪ್ರಾಧಿಕಾರದ ವ್ಯಾಪ್ತಿಗೆ ಹೊರನಾಡು" ಎಂಬ ವ್ಯಾಖ್ಯಾನವನ್ನು ಸೇರಿಸಿ ಗಡಿನಾಡು ಮತ್ತು ಹೊರನಾಡು (ಹೊರರಾಜ್ಯ ಮತ್ತು ಹೊರದೇಶದಲ್ಲಿನ ಕನ್ನಡಿಗರ ಶೈಕ್ಷಣಿಕ, ಸಾಂಸ್ಕೃತಿಕ ಯೋಜನೆಗಳು) ಪ್ರದೇಶಗಳಲ್ಲಿ ಶೈಕ್ಷಣಿಕ, ಸಾಂಸ್ಕೃತಿಕ ಅಭಿವೃದ್ಧಿಯ ಜೊತೆಗೆ ಕನ್ನಡ ಭವನಗಳನ್ನು ನಿರ್ಮಿಸಲು ಅವಕಾಶವನ್ನು ಕಲ್ಪಿಸಿದೆ.

ಮೇಲೆ ಓದಲಾದ (4)ರಲ್ಲಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮದ 26ನೇ ಪ್ರಕರಣದ ತರುವಾಯ 27ನೇ ಹೊಸ ಪ್ರಕರಣವನ್ನು ಸೇರ್ಪಡೆ ಮಾಡಿ ರಾಜ್ಯದಲ್ಲಿ ರಚನೆಯಾದ 11 ಹೊಸ ತಾಲ್ಲೂಕುಗಳನ್ನು ಸೇರ್ಪಡೆ ಮಾಡಲಾಗಿದೆ. ಪ್ರಸ್ತುತ ಒಟ್ಟು 63 ಗಡಿ ತಾಲ್ಲೂಕುಗಳು ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಟ್ಟಿವೆ.

ಮೇಲೆ ಓದಲಾದ (5)ರಲ್ಲಿ, ಶ್ರೀ ಟಿ.ಎಂ. ವಿಜಯಭಾಸ್ಕರ್ ಭಾ.ಆ.ಸೇ(ನಿ), ಅಧ್ಯಕ್ಷರು, ಆಡಳಿತ ಸುಧಾರಣ ಆಯೋಗ-2 ರ 7ನೇ ಆಡಳಿತ ಸುಧಾರಣೆ ವರದಿಯಲ್ಲಿನ ಶಿಫಾರಸ್ಸಿನ ಪ್ರಕಾರ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ರಾಜ್ಯದ ಗಡಿ ತಾಲ್ಲೂಕುಗಳಲ್ಲಿ ರಸ್ತೆಗಳು, ಕಟ್ಟಡಗಳು, ಗ್ರಂಥಾಲಯಗಳು, ಶೌಚಾಲಯಗಳು, ತರಗತಿ ಕೊಠಡಿಗಳು, ಆಟದ ಮೈದಾನಗಳನ್ನು ಸೇರಿದಂತೆ ಇತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಬೇಕಾಗಿದ್ದು, ಇದೇ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುತ್ತಿರುವ ಪ್ರದೇಶಾಭಿವೃದ್ಧಿ ಮಂಡಳಿಗಳು ಯೋಜನಾ ಇಲಾಖೆಯ ವ್ಯಾಪ್ತಿಯಲ್ಲಿರುವುದರಿಂದ ಇಂತಹ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಪ್ರಾಧಿಕಾರಗಳನ್ನು ಒಂದೇ ಸೂರಿನಡಿ ತರುವ ಉದ್ದೇಶದಿಂದ "ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನೂ ಸಹ ಮೇಲ್ಕಂಡ ಎಲ್ಲಾ ಉದ್ದೇಶಗಳನ್ನು ಅನುಷ್ಠಾನ ಮಾಡುವ ದೃಷ್ಟಿಯಿಂದ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಆಡಳಿತ ವ್ಯಾಪ್ತಿಗೆ ತರಲು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ".

ಮೇಲೆ ಓದಲಾದ (6)ರಲ್ಲಿ, ಕರ್ನಾಟಕ ಆಡಳಿತ ಸುಧಾರಣ ಆಯೋಗದ 7ನೇ ವರದಿಯ ಅಧ್ಯಾಯ 8ರ ಪುಟ ಸಂಖ್ಯೆ 14 ರಲ್ಲಿ ತಿಳಿಸಿರುವ ಅಂಶದ ಬಗ್ಗೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ತನ್ನ ಸಾಮಾನ್ಯ ಸಭೆಯಲ್ಲಿ ಸವಿಸ್ತಾರವಾಗಿ ಚರ್ಚಿಸಿ, ಸುಸ್ಥಿರ ಶೈಕ್ಷಣಿಕ, ಸಾಂಸ್ಕೃತಿಕ, ಸಾಮಾಜಿಕ ಹಾಗೂ ಇತರ ಎಲ್ಲಾ ಮೂಲಭೂತ ಕಾಮಗಾರಿಗಳನ್ನು ಗಡಿನಾಡು ಹಾಗೂ ಹೊರನಾಡು ಪ್ರದೇಶಗಳಲ್ಲಿ ಕೈಗೊಳ್ಳಲು ಪ್ರಸ್ತಾಪಿಸಿರುವುದನ್ನು ಸಮ್ಮತಿಸಿ ದಿನಾಂಕ:03-06-2024ರ ಸರ್ವ ಸದಸ್ಯರ ಸಭೆಯಲ್ಲಿ ಅನುಮೋದಿಸಿದ್ದು, ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸನ್ನು ಅನುಷ್ಠಾನಕ್ಕೆ ತರಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಯೋಜನಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶ್ರೀ ಆರ್.ವಿ. ದೇಶಪಾಂಡೆ, ಮಾನ್ಯ ಅಧ್ಯಕ್ಷರು ಹಾಗೂ ಮಾಜಿ ಸಚಿವರು, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ಹಾಗೂ ಮಾನ್ಯ ಮುಖ್ಯಮಂತ್ರಿಗಳು ಬೆಂಗಳೂರು ರವರಿಗೆ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತದೆ.

ಮೇಲೆ ಓದಲಾದ (7)ರಲ್ಲಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪ್ರಸ್ತಾವನೆಯನ್ನು ಯೋಜನಾ ಇಲಾಖೆಯು ಕಡತ ಸಂಖ್ಯೆ: ಪಿಡಿಎಸ್/127/ಪಿ.ಎಂ.ಎಸ್/2024ರಲ್ಲಿ ವಿವರವನ್ನು ಕಾರ್ಯದರ್ಶಿಗಳು ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರು ಪರಾಮರ್ಶಿಸಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಸನ್ಮಾನ್ಯ ಮುಖ್ಯ ಮಂತ್ರಿಗಳು ಕರ್ನಾಟಕ ಸರ್ಕಾರ ರವರು ಒಪ್ಪಿಗೆ ನೀಡಿ, ಯೋಜನಾ ಇಲಾಖೆಯ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮೂಲಕ ಗೌರವಾನ್ವಿತ ರಾಜ್ಯಪಾಲರು ಅನುಮೋದನೆ ನೀಡಿರುತ್ತಾರೆ.

ಮೇಲೆ ಓದಲಾದ (8)ರಲ್ಲಿ, ಗೌರವಾನ್ವಿತ ರಾಜ್ಯಪಾಲರು ಕರ್ನಾಟಕ ಸರ್ಕಾರ ರವರು ನೀಡಿದ ದಿನಾಂಕ:01-03-2025ರ ಅನುಮೋದನೆಯಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು) ರವರು ಭಾರತ ಸಂವಿಧಾನದ 166ನೇ ಅನುಚ್ಛೇದದ ಕಲಂ 2 ಮತ್ತು 3 ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರದ (ಕೆಲಸಗಳ ಹಂಚಿಕೆ) ನಿಯಮಗಳು 1977 ರಲ್ಲಿ ತಿದ್ದುಪಡಿ ಮಾಡಲು ಕರ್ನಾಟಕ ರಾಜ್ಯಪತ್ರ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಅಧಿಸೂಚನೆ ಹೊರಡಿಸಲಾಗಿದೆ.

ಮೇಲೆ ಓದಲಾದ (9)ರಲ್ಲಿ, ರಾಜ್ಯದ ಗಡಿಗಳಲ್ಲಿನ ಮೂಲಸೌಕರ್ಯ ಹಾಗೂ ಸಾಮಾಜಿಕ ಸುಧಾರಣೆ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಗಡಿ ಅಭಿವೃದ್ಧಿ ಪ್ರಾಧಿಕಾರವನ್ನು ಯೋಜನಾ ಇಲಾಖೆಯ ವ್ಯಾಪ್ತಿಗೆ ತರಲಾಗುವುದು ಎಂದು ಘೋಷಣೆಯಾಗಿರುತ್ತದೆ.

ಮೇಲೆ ವಿವರಿಸಿರುವಂತೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಕಚೇರಿಯು ರಾಜ್ಯದ 19 ಗಡಿ ಜಿಲ್ಲೆಗಳು, 63 ಗಡಿ ತಾಲ್ಲೂಕುಗಳು ಹಾಗೂ 06 ಗಡಿ ಭಾಗದ ಹೊರರಾಜ್ಯಗಳು ಸೇರಿದಂತೆ, ಗಡಿನಾಡ ಜೊತೆಗೆ ರಾಜ್ಯದಿಂದ ಹೊರಗಿರುವ ಎಲ್ಲಾ ಪ್ರದೇಶಗಳಲ್ಲಿ ನೆಲೆಸಿರುವ ಕನ್ನಡಿಗರಿಗೆ ಶೈಕ್ಷಣಿಕ, ಸಾಂಸ್ಕೃತಿಕ ಯೋಜನೆಗಳ ಜೊತೆಗೆ ಸಾಮಾಜಿಕ ಹಾಗೂ ಇತರೆ ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಾಗ ನಿರ್ದಿಷ್ಟವಾಗಿ ಕನ್ನಡ ಭಾಷೆಗೆ ಸೀಮಿತಗೊಳಿಸದೇ ರಾಜ್ಯದ ಹಾಗೂ ಹೊರನಾಡಿನ ಕನ್ನಡಿಗರು ವಾಸವಾಗಿರುವ ಗಡಿ ಭಾಗದ ಪ್ರದೇಶಗಳು ನಿರ್ಲಕ್ಷ್ಯಕ್ಕೆ ಒಳಗಾಗದಂತೆ ಸಮಗ್ರವಾಗಿ ಅಭಿವೃದ್ಧಿಪಡಿಸಲು ಗಡಿ ಗ್ರಾಮಗಳಲ್ಲಿ ರಸ್ತೆಗಳು, ಕಟ್ಟಡಗಳು, ಶೌಚಾಲಯಗಳು, ವಿದ್ಯುತ್ ದೀಪ, ಶಾಲಾ ಕೊಠಡಿಗಳು, ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ, ಗಣಕಯಂತ್ರ ಪರಿಕರಗಳು, ವಿದ್ಯಾರ್ಥಿ ವಸತಿನಿಲಯ, ಸಾಂಸ್ಕೃತಿಕ ಭವನ, ಕುಡಿಯುವ ನೀರು, ಪಿಠೋಪಕರಣ, ಸಮುದಾಯ ಭವನ, ಗ್ರಂಥಾಲಯಗಳು, ರಂಗ ಮಂದಿರ, ಕ್ರೀಡಾ ಕೊಠಡಿ, ಗಣಕ ಯಂತ್ರ ಕೊಠಡಿ, ಆಟದ ಮೈದಾನಗಳನ್ನು ಹಾಗೂ ಇತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಹಾಗೂ ಹೊರನಾಡಿನ (ಹೊರರಾಜ್ಯ ಹಾಗೂ ಹೊರದೇಶಗಳ ಕನ್ನಡಿಗರ) ಜನರ ಶೈಕ್ಷಣಿಕ/ ಸಾಂಸ್ಕೃತಿಕ ಆಕಾಂಕ್ಷೆಗಳನ್ನು ಈಡೇರಿಸುವ ವ್ಯಾಪ್ತಿಯನ್ನು ಹೊಂದಿರುವುದರಿಂದ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಿಂದ ಹಿಂಪಡೆದು ಇದೇ ರೀತಿ ಅಭಿವೃದ್ಧಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಗಳು ಹಾಗೂ ಪ್ರಾಧಿಕಾರವು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಅಡಿಯಲ್ಲಿರುವುದರಿಂದ, ಗಡಿ ನಾಡು ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ಸರ್ಕಾರವು ಯೋಜನಾ ಇಲಾಖೆಗೆ ವರ್ಗಾಯಿಸಲು ಉದ್ದೇಶಿಸಲಾಗಿದೆ. ಅದರಂತೆ, ಈ ಆದೇಶ.

**<u>ಸರ್ಕಾರದ ಆದೇಶ ಸಂ: ಪಿಡಿಎಸ್/ಕೆಬಿಎಡಿ/1/ 2025, ಬೆಂಗಳೂರು, ದಿನಾಂಕ:15.03.2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳಂತೆ, ರಾಜ್ಯದ 19 ಗಡಿ ಜಿಲ್ಲೆಗಳು, 63 ಗಡಿ ತಾಲ್ಲೂಕುಗಳು ಹಾಗೂ 06 ಗಡಿ ಭಾಗದ ಹೊರರಾಜ್ಯಗಳು ಸೇರಿದಂತೆ, ಗಡಿನಾಡ ಜೊತೆಗೆ ರಾಜ್ಯದಿಂದ ಹೊರಗಿರುವ ಎಲ್ಲಾ ಪ್ರದೇಶಗಳಲ್ಲಿ ನೆಲೆಸಿರುವ ಕನ್ನಡಿಗರಿಗೆ ಶೈಕ್ಷಣಿಕ, ಸಾಂಸ್ಕೃತಿಕ ಯೋಜನೆಗಳ ಜೊತೆಗೆ ಸಾಮಾಜಿಕ ಹಾಗೂ ಇತರೆ ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಾಗ ನಿರ್ದಿಷ್ಟವಾಗಿ ಕನ್ನಡ

ಭಾಷೆಗೆ ಸೀಮಿತಗೊಳಿಸದೇ ರಾಜ್ಯದ ಹಾಗೂ ಹೊರನಾಡಿನ ಕನ್ನಡಿಗರು ವಾಸವಾಗಿರುವ ಗಡಿ ಭಾಗದ ಪ್ರದೇಶಗಳು ನಿರ್ಲಕ್ಷ್ಯಕ್ಕೆ ಒಳಗಾಗದಂತೆ ಸಮಗ್ರವಾಗಿ ಅಭಿವೃದ್ಧಿಪಡಿಸುವ ಕಾರ್ಯಗಳನ್ನು ಹೊಂದಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಗಡಿ ನಾಡು ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಿಂದ ಹಿಂಪಡೆದು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ವ್ಯಾಪ್ತಿಗೆ ಸೇರ್ಪಡೆಗೊಳಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಚಂದ್ರಶೇಖರಯ್ಯ)
ನಿರ್ದೇಶಕರು
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ
ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ

ಇವರಿಗೆ:

1) ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಅಧ್ಯಕ್ಷರು, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8) ಮಾನ್ಯ ಯೋಜನಾ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10) ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ, ವಿಧಾನಸೌಧ, ಬೆಂಗಳೂರು.
11) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ, ಬೆಂಗಳೂರು.
12) ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಕಲಬುರ್ಗಿ, ಬೆಳಗಾವಿ ಮತ್ತು ಮೈಸೂರು.
13) ಎಲ್ಲಾ ಜಿಲ್ಲಾಧಿಕಾರಿಗಳು.
14) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಬೆಂಗಳೂರು.
15) ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
16) ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ, ವಿಧಾನಸೌಧ, ಬೆಂಗಳೂರು.
17) ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು.
18) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-7, ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ, ವಿಧಾನಸೌಧ, ಬೆಂಗಳೂರು.
19) ಸಮನ್ವಯ ಶಾಖೆ / ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.